Civil Misc - 3/2025
ಪಿಡಬ್ಲ್ಯು - 01
ದಿನಾಂಕಃ 30-04-2026
ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಶ್ರೀ. ಎಂ ಎಸ್ ಎನ ವಕೀಲರಿಂದಃ**

ಈ ಅರ್ಜಿಯಲ್ಲಿ ನಾನು ಅರ್ಜಿದಾರನಾಗಿದ್ದು, ಇಂದು ನಾನು ನನ್ನ ಮೌಖಿಕ ಸಾಕ್ಷ್ಯದ ಬದಲು ಈ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದೇನೆ. ಇದರಲ್ಲಿ ಬರೆದ ಎಲ್ಲ ವಿಷಯ ನಿಜ ಮತ್ತು ಸರಿ ಇದ್ದು ನನಗೆ ಗೊತ್ತಿದೆ.

ನಾನು ಈ ಕೆಳಕಂಡ ದಸ್ತಾವೇಜುಗಳನ್ನು ಹಾಜರು ಪಡಿಸಿದ್ದೇನೆ.

ಅಸಲುದಾವಾ ಸಂಖ್ಯೆ 132/2021 ರ ಆದೇಶದ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 1 ಎಂದು ಗುರುತಿಸಲಾಯಿತು.

ಆದ್ದರಿಂದ ಅರ್ಜಿಯಲ್ಲಿ ಕೋರಿಕೊಂಡಂತೆ ಆದೇಶ ಮಾಡಬೇಕೆಂದು ಕೇಳಿಕೊಳ್ಳುತ್ತೇನೆ.

**ಪಾಟೀ ಸವಾಲುಃ ಎದುರುದಾರರ ಪರ ಶ್ರೀ ವಿ ಬಿ ಟಿ ವಕೀಲರಿಂದಃ**

ಅಸಲು ದಾವೆ 132/2021 ಯಾವ ದಿನಾಂಕಕ್ಕೆ ಇತ್ತು ಎಂದು ನಿಮಗೆ ಗೊತ್ತಾ ಎಂದರೆ ಗೊತ್ತಿಲ್ಲ. ಸದರಿ ದಾವೆ ಯಾವಾಗ ವಜಾ ಆಯಿತು ಎಂದು ನಿಮಗೆ ಗೊತ್ತಾಯಿತು ಎಂದರೆ ನೆನೆಪಿಲ್ಲ. ಸದರಿ ದಾವೆ ಕುರಿತು ಯಾವಾಗ ರಾಜಿ ಮಾತುಕತೆ ಆಗಿರುತ್ತದೆ ಎಂದರೆ ಆಗಿರುವುದಿಲ್ಲ. ನಿಮ್ಮ ವಕೀಲರು ಆಸ್ಪತ್ರೆಗೆ ಯಾವಾಗ ಹೋಗಿದ್ದರು ಎಂದರೆ ಶನಿವಾರ ಹೋಗಿದ್ದರು ದಿನಾಂಕ ಗೊತ್ತಿಲ್ಲ. ಅಸಲು ದಾವೆಯಲ್ಲಿ ನ್ಯಾಯಾಲಯದವರು ಸಾಕ್ಷಿ ಮಾಡಿಸಲು ಸಾಕಷ್ಟು ಅವಕಾಶಗಳನ್ನು ಕೊಟ್ಟಿದ್ದರು ಎಂದರೆ ಸರಿಯಲ್ಲ. ನಿಮ್ಮ ಪ್ರಮಾಣ ಪತ್ರದಲ್ಲಿ ಏನು ಬರೆದಿದ್ದಾರೆ ಎಂದು ನಿಮಗೆ ಮಾಹಿತಿ ಇಲ್ಲ ಎಂದರೆ ಸರಿಯಲ್ಲ. ನಿಮಗೆ ನ್ಯಾಯಾಲಯದವರು ಸಾಕಷ್ಟು ಅವಕಾಶಗಳನ್ನು ಕೊಟ್ಟಿದ್ದರು ಅದನ್ನು ಸದುಪಯೋಗ ಪಡಿಸಿಕೊಳ್ಳದೆ ಎದುರುದಾರರಿಗೆ ತೊಂದರೆ ಕೊಡುವ ಸಲುವಾಗಿ ಸಾಕಷ್ಟು ಮುದ್ದತ್ತುಗಳನ್ನು ತೆಗೆದುಕೊಂಡಿರುತ್ತೀರಿ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ.**

( ತೆರೆದ ನ್ಯಾಯಾಲಯದಲ್ಲಿ ನನ್ನ ಸಮಕ್ಷಮ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು.)

ಓ. ಹೆ. ಕೆ. ಸರಿ ಅದೆ.

ದಿವಾಣಿ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂಡಾಧಿಕಾರಿಗಳು, ಸವಣೂರು